**Akashvani : Bangalore**
**National Bulletin In Kannada**
**01.03.2025 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**೧. ೨೧ನೇ ಶತಮಾನದ ಭಾರತದತ್ತ ಜಗತ್ತು ಕುತೂಹಲದಿಂದ ನೋಡುತ್ತಿದೆ- ಪ್ರಧಾನಿ ನರೇಂದ್ರ ಮೋದಿ**

**೨. ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ಮಣಿಪುರದ ಭದ್ರತಾ ಪರಿಸ್ಥಿತಿ ಪರಿಶೀಲನೆ**

**೩. ಉತ್ತರಾಖಂಡದ ಮಾನಾದಲ್ಲಿ ಹಿಮಪಾತ; ೫೦ ಕಾರ್ಮಿಕರ ರಕ್ಷಣೆ**

**೪. ಡಬ್ಲ್ಯು ಪಿಎಲ್ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು - ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ**

**<><*<><>*><>**

೨೧ ನೇ ಶತಮಾನದ ಭಾರತದತ್ತ ಜಗತ್ತು ಕುತೂಹಲದಿಂದ ನೋಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಭಾರತ್ ಮಂಟಪಂನಲ್ಲಿ ನಡೆದ ೨೦೨೫ ಎನ್‌ಎಕ್ಸ್‌ಟಿ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಪಂಚದಾದ್ಯಂತದ ಜನರು ಭಾರತವನ್ನು ತಿಳಿದುಕೊಳ್ಳಲು ಭಾರತಕ್ಕೆ ಬರಲು ಬಯಸುತ್ತಾರೆ. ಇಂದು ಭಾರತವು ನಿರಂತರವಾಗಿ ಸಕಾರಾತ್ಮಕ ಸುದ್ದಿಗಳನ್ನು ಸೃಷ್ಟಿಸುತ್ತಿರುವ ದೇಶವಾಗಿದೆ ಎಂದರು. ಪ್ರಯಾಗರಾಜ್‌ನಲ್ಲಿ ಮುಕ್ತಾಯಗೊಂಡ ಏಕತೆಯ ಸಂಗಮವಾದ ಮಹಾಕುಂಭವು, ನದಿಯ ದಡದಲ್ಲಿರುವ ತಾತ್ಕಾಲಿಕ ನಗರದಲ್ಲಿ ಕೋಟ್ಯಂತರ ಜನರು ಪವಿತ್ರ ಸ್ನಾನ ಮಾಡಿದ ರೀತಿ ಇಡೀ ಜಗತ್ತನ್ನು ಅಚ್ಚರಿಗೊಳಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಈಗ ಆಯುಷ್ ಉತ್ಪನ್ನಗಳು ಮತ್ತು ಯೋಗವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲಾಗಿದೆ. ಈ ಹಿಂದೆ ಆಮದು ಮಾಡಿಕೊಳ್ಳುತ್ತಿದ್ದ ಸರಕುಗಳನ್ನು ಈಗ ಸ್ಥಳೀಯವಾಗಿ ಉತ್ಪಾದಿಸಲಾಗುತ್ತಿದೆ. ಅಲ್ಲದೇ, ಆ ಉತ್ಪನ್ನಗಳಿಗೆ ದೇಶವು ರಫ್ತು ಕೇಂದ್ರವಾಗಿ ಹೊರಹೊಮ್ಮುತ್ತಿದೆ ಎಂದು ಅವರು ಹರ್ಷ ವ್ಯಕ್ತಪಡಿಸಿದರು. ಒಂದು ಕಾಲದಲ್ಲಿ ಸ್ಥಳೀಯ ಮಾರುಕಟ್ಟೆಗಳಿಗೆ ಸೀಮಿತವಾಗಿದ್ದ ರೈತರು ಈಗ ತಮ್ಮ ಬೆಳೆಗಳು ಜಾಗತಿಕ ಮಾರುಕಟ್ಟೆಗಳನ್ನು ತಲುಪುವುದನ್ನು ನೋಡುತ್ತಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯ ಓಫಿಖಿ ಸಮ್ಮೇಳನದಲ್ಲಿ ಶ್ರೀಲಂಕಾದ ಮಾಜಿ ಅಧ್ಯಕ್ಷ ರನಿಲ್ ವಿಕ್ರಮಸಿಂಘೆ ಮತ್ತು ಆಸ್ಟ್ರೇಲಿಯಾದ ಮಾಜಿ ಪ್ರಧಾನಿ ಟೋನಿ ಅಬಾಟ್ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ವಿವಿಧ ವಿಷಯಗಳ ಕುರಿತು ವಿಕ್ರಮಸಿಂಘೆ ಅವರ ದೃಷ್ಟಿಕೋನವನ್ನು ಮೆಚ್ಚುತ್ತೇನೆ ಎಂದು ಹೇಳಿದರು. ಆಸ್ಟ್ರೇಲಿಯಾದ ಮಾಜಿ ಪ್ರಧಾನಿಯೊಂದಿಗಿನ ಭೇಟಿಗೆ ಸಂತೋಷ ವ್ಯಕ್ತಪಡಿಸಿದ ಪ್ರಧಾನಿ ಮೋದಿ, ಟೋನಿ ಅಬಾಟ್ ಯಾವಾಗಲೂ ಭಾರತದ ಸ್ನೇಹಿತರಾಗಿದ್ದಾರೆ ಎಂದರು. ರಷ್ಯಾದ ಪ್ರಮುಖ ಗಗನಯಾತ್ರಿ ಒಲೆಗ್ ಆರ್ಟೆಮಿಯೆವ್, ಲೇಖಕ ಅಲೆಕ್ ರಾಸ್, ಅಮೆರಿಕದ ಪ್ರಮುಖ ಭೌತಶಾಸ್ತ್ರಜ್ಞ ಡಾ. ಬ್ರಿಯಾನ್ ಗ್ರೀನ್ ಸೇರಿದಂತೆ ಇತರರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಂವಾದ ನಡೆಸಿದರು.

**<><*<><>*><>**

ಈ ಬಾರಿಯ ಬಜೆಟ್‌ನಲ್ಲಿ ಘೋಷಿಸಲಾಗಿರುವ ನೀತಿಗಳಿಂದಾಗಿ ವಿಕಸಿತ ಭಾರತದ ದೃಷ್ಟಿಕೋನ ವಿಸ್ತಾರಗೊಂಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಕೃಷಿ ಮತ್ತು ಗ್ರಾಮೀಣ ಸಮೃದ್ಧಿ ಕುರಿತಾದ ವೆಬಿನಾರ್‌ಅನ್ನು ವರ್ಚುವಲ್ ಮೂಲಕ ಉದ್ದೇಶಿಸಿ ಮಾತನಾಡಿದ ಅವರು, ಎಲ್ಲಾ ಮಧ್ಯಸ್ಥಗಾರರ ಸಹಕಾರದೊಂದಿಗೆ ರೈತರ ಸಬಲೀಕರಣ ಹಾಗೂ ಅಭಿವೃದ್ಧಿಯನ್ನು ಖಾತ್ರಿಪಡಿಸುವ ಭಾರತದ ನಿರ್ಮಾಣದ ಹಾದಿಯಲ್ಲಿ ನಾವಿದ್ದೇವು. ಪ್ರತಿಯೊಬ್ಬ ರೈತನನ್ನು ಮುನ್ನೆಲೆಗೆ ತಂದು ಗೌರವ ನೀಡಲಾಗಿದೆ ಎಂದರು. ಕೃಷಿ ವಲಯದ ಅಭಿವೃದ್ಧಿ ಮತ್ತು ಗ್ರಾಮಗಳ ಸಮೃದ್ಧಿ ಎಂಬ ಎರಡು ಗುರಿಗಳೊಂದಿಗೆ ಮುನ್ನಡೆಯುತ್ತಿದ್ದೇವೆ. ಆರು ವರ್ಷಗಳ ಹಿಂದೆ ಜಾರಿ ಮಾಡಲಾದ ಪಿಎಂ-ಕಿಸಾನ್ ಸಮ್ಮಾನ್ ಯೋಜನೆ ಅಡಿ ಮೂರು ಮುಕ್ಕಾಲು ಲಕ್ಷ ಕೋಟಿ ರೂಪಾಯಿ ರೈತರ ಖಾತೆಗಳಲ್ಲಿ ಜಮಾ ಆಗಿದೆ ಎಂದು ಪ್ರಧಾನಿ ಹೇಳಿದರು. ೨೦೨೫ರ ಆಯವ್ಯಯದಲ್ಲಿ ಮಾಡಲಾದ ಘೋಷಣೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕೇಂದ್ರೀಕೃತ ಚರ್ಚೆ ಮತ್ತು ಕಾರ್ಯತಂತ್ರ ರೂಪಿಸುವಲ್ಲಿ ಪಾಲುದಾರರನ್ನು ತೊಡಗಿಸಿಕೊಳ್ಳುವುದು ಈ ವೆಬಿನಾರ್‌ನ ಗುರಿಯಾಗಿದೆ. ಈ ಕಾರ್ಯಕ್ರಮ

ಸಹಯೋಗದ ವಿಧಾನವನ್ನು ಅನುಸರಿಸಿ ಆಯ-ವ್ಯಯದಲ್ಲಿ ವಿವರಿಸಿರುವ ದೃಷ್ಟಿಕೋನವನ್ನು ಸಾಕಾರಗೊಳಿಸಲು ಕೃಷಿ ಬೆಳವಣಿಗೆ ಮತ್ತು ಗ್ರಾಮೀಣ ಸಮೃದ್ಧಿಯ ಮೇಲೆ ಕೇಂದ್ರೀಕರಿಸಿದೆ.

<><*<><>*><>

ನವದೆಹಲಿಯಲ್ಲಿ ಇಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮಣಿಪುರದ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಿದರು. ಮಾರ್ಚ್ ೮ ರಿಂದ ಮಣಿಪುರದ ಎಲ್ಲ ಮಾರ್ಗಗಳಲ್ಲಿ ಜನರ ಮುಕ್ತ ಸಂಚಾರವನ್ನು ಖಚಿತಪಡಿಸಿಕೊಳ್ಳುವಂತೆ ನಿರ್ದೇಶನ ನೀಡಿದರು. ಮಣಿಪುರ ರಾಜ್ಯಪಾಲ ಅಜಯ್ ಕುಮಾರ್ ಭಲ್ಲಾ ಅವರ ಸಮ್ಮುಖದಲ್ಲಿ ಭದ್ರತಾ ಪರಿಸ್ಥಿತಿಯ ಕುರಿತು ಉನ್ನತಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವ ಅಮಿತ್ ಶಾ, ರಸ್ತೆಗಳಲ್ಲಿ ಅಡೆತಡೆಗಳನ್ನು ಸೃಷ್ಟಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಮಣಿಪುರದ ಅಂತಾರಾಷ್ಟ್ರೀಯ ಗಡಿಯಲ್ಲಿ ಗೊತ್ತುಪಡಿಸಿದ ಪ್ರವೇಶ ಮಾರ್ಗಗಳ ಎರಡೂ ಬದಿಗಳಲ್ಲಿ ಬೇಲಿ ಹಾಕುವ ಕೆಲಸವನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕು ಎಂದು ನಿರ್ದೇಶಿಸಿದರು. ಮಣಿಪುರವನ್ನು ಮಾದಕವಸ್ತು ಮುಕ್ತ ಮಾಡುವ ನಿಟ್ಟಿನಲ್ಲಿ ಮಾದಕವಸ್ತು ವ್ಯಾಪಾರದಲ್ಲಿ ತೊಡಗಿರುವ ಸಂಪೂರ್ಣ ಜಾಲವನ್ನು ನಿಷ್ಕ್ರಿಯಗೊಳಿಸಬೇಕು ಎಂದು ಸೂಚಿಸಿದ ಅವರು, ಮಣಿಪುರದಲ್ಲಿ ಶಾಶ್ವತವಾಗಿ ಶಾಂತಿಯನ್ನು ಪುನರ್ ಸ್ಥಾಪಿಸಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಸಂಪೂರ್ಣವಾಗಿ ಬದ್ಧವಾಗಿದೆ. ಈ ನಿಟ್ಟಿನಲ್ಲಿ ಅಗತ್ಯವಿರುವ ಎಲ್ಲ ಸಹಾಯವನ್ನು ನೀಡುತ್ತಿದೆ ಎಂದು ಅಮಿತ್ ಶಾ ಹೇಳಿದರು.

<><*<><>*><>

ತಂತ್ರಜ್ಞಾನದ ಸಮರ್ಥ ಬಳಕೆಯಿಂದಾಗಿ ಸರ್ಕಾರವು ಸಾರ್ವಜನಿಕರಿಂದ ಸಂಗ್ರಹಿಸುವ ತೆರಿಗೆಯನ್ನು ಇಂದು ಉತ್ತಮವಾಗಿ ನಿರ್ವಹಿಸುತ್ತಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ೪೯ನೇ ನಾಗರಿಕ ಖಾತೆಗಳ ದಿನಾಚರಣೆ ಕಾರ್ಯಕ್ರಮದಲ್ಲಿ ಸಾರ್ವಜನಿಕ ಹಣಕಾಸು ನಿರ್ವಹಣಾ ವ್ಯವಸ್ಥೆ - ಪಿಎಫ್ಎಂಎಸ್ ಶ್ಲಾಘಿಸಿದ ಸಚಿವರು, ಸರ್ಕಾರಿ ಸೇವೆಗಳು ನಾಗರಿಕರಿಗೆ ಎಲೆಕ್ಟ್ರಾನಿಕ್ ರೂಪದಲ್ಲಿ ಲಭ್ಯವಾಗುವಂತೆ ಮಾಡಲು ಸರ್ಕಾರ ಡಿಜಿಟಲ್ ಇಂಡಿಯಾ ಉಪಕ್ರಮವನ್ನು ಬೆಂಬಲಿಸುವುದನ್ನು ಮುಂದುವರೆಸಿದೆ. ಪಿಎಫ್ಎಂಎಸ್, ೬೦ ಕೋಟಿ ಫಲಾನುಭವಿಗಳಿಗೆ ಪಾರದರ್ಶಕ ಸೇವೆ ಒದಗಿಸುತ್ತಿದೆ ಎಂದರು. ಭಾರತೀಯ ನಾಗರಿಕ ಖಾತೆ ಸೇವಾ ಅಧಿಕಾರಿಗಳ ಪಾತ್ರವನ್ನು ಶ್ಲಾಘಿಸಿದ ಅವರು, ಪ್ರಸಕ್ತ ಹಣಕಾಸು ವರ್ಷದಲ್ಲಿ ಇಲಾಖೆಯು, ಪಿಂಚಣಿದಾರರ ೧೬ ಸಾವಿರಕ್ಕೂ ಹೆಚ್ಚು ಕುಂದು-ಕೊರತೆಗಳನ್ನು ಪರಿಹರಿಸಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದರು.

<><*<><>*><>

ಉತ್ತರಾಖಂಡದ ಚಮೋಲಿ ಜಿಲ್ಲೆಯ ಮಾನಾ ಗ್ರಾಮದಲ್ಲಿ ನಿನ್ನೆ ಸಂಭವಿಸಿದ ಹಿಮಪಾತದಲ್ಲಿ ಸಿಲುಕಿದ್ದ ೫೦ ಕಾರ್ಮಿಕರನ್ನು ರಕ್ಷಿಸಲಾಗಿದ್ದು, ಇನ್ನು ಉಳಿದ ೫ ಜನರಿಗಾಗಿ ಶೋಧ ಕಾರ್ಯ ಮುಂದುವರಿದಿದೆ. ಇದೇ ವೇಳೆ ಗಾಯಗೊಂಡ ನಾಲ್ವರು ಕಾರ್ಮಿಕರು ಮೃತಪಟ್ಟಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಗಡಿ ರಸ್ತೆಗಳ ಸಂಸ್ಥೆ- ಬಿಆರ್ಒ ದ ಕಮಾಂಡರ್ ಅಂಕುರ್ ಮಹಾಜನ್, ಭಾರತೀಯ ಸೇನೆ, ಬಿಆರ್ಒ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆಗಳ ತಂಡಗಳು ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ ಎಂದಿದ್ದಾರೆ. ಈ ಕುರಿತಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರೊಂದಿಗೆ ಮಾತುಕತೆ ನಡೆಸಿದ್ದು, ಸಾಧ್ಯವಾದ ಎಲ್ಲಾ ನೆರವು ನೀಡುವ ಭರವಸೆ ನೀಡಿದ್ದಾರೆ.

<><*<><>*><>

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಇಂದು ಅಹಮದಾಬಾದ್ ರೈಲು ನಿಲ್ದಾಣಕ್ಕೆ ಭೇಟಿ ನೀಡಿ, ನಿಲ್ದಾಣದ ಪುನರಾಭಿವೃದ್ಧಿ ಕಾರ್ಯಗಳನ್ನು ಪರಿಶೀಲಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಸಾರ್ವಜನಿಕರ ಮನವಿಯ ಮೇರೆಗೆ ಪಾರಂಪರಿಕ ಅಂಶಗಳೊಂದಿಗೆ ನಿಲ್ದಾಣದ ವಿನ್ಯಾಸವನ್ನು ಪರಿಷ್ಕರಿಸಲಾಗಿದೆ ಎಂದು ಹೇಳಿದರು. ಗುಜರಾತ್‌ನ ಸಾಂಸ್ಕೃತಿಕ ಸಂಕೇತವಾದ 'ತೋರಣ್' ನಂತಹ ಪ್ರಮುಖ ವೈಶಿಷ್ಟ್ಯಗಳನ್ನು ಪ್ರವೇಶದ್ವಾರದಲ್ಲಿ ಬಿಂಬಿಸಲಾಗುವುದು. ಇದು ನಗರದ ಶ್ರೀಮಂತ ಸಂಪ್ರದಾಯಗಳನ್ನು ಪ್ರತಿಬಿಂಬಿಸುತ್ತದೆ. ಮುಂದಿನ ಮೂರುವರೆ ವರ್ಷಗಳಲ್ಲಿ ಪೂರ್ಣಗೊಳ್ಳಲಿರುವ ಅಹಮದಾಬಾದ್ ರೈಲು ನಿಲ್ದಾಣವನ್ನು ಪುನರಾಭಿವೃದ್ಧಿ ಮಾಡಲು ಅತ್ಯಂತ ಆಧುನಿಕ ರಚನಾತ್ಮಕ ನಿರ್ಮಾಣ ತಂತ್ರಜ್ಞಾನವನ್ನು ಬಳಸಲಾಗುತ್ತಿದೆ ಎಂದು ಸಚಿವ ಅಶ್ವಿನಿ

ವೈಷ್ಣವ್ ತಿಳಿಸಿದರು. ಗುಜರಾತ್‌ನಲ್ಲಿ ಇಲ್ಲಿಯವರೆಗೆ ರೈಲು ಮಾರ್ಗಗಳಲ್ಲಿ ಶೇಕಡ ೯೭ ರಷ್ಟು ವಿದ್ಯುದ್ದೀಕರಣಗೊಳಿಸಲಾಗಿದೆ. ಶೀಘ್ರದಲ್ಲೇ ಶೇಕಡಾ ೧೦೦ ರಷ್ಟು ವಿದ್ಯುದ್ದೀಕೃತ ರೈಲು ಮಾರ್ಗಗಳನ್ನು ರಾಜ್ಯ ಹೊಂದಲಿದೆ ಎಂದು ಸಚಿವರು ತಿಳಿಸಿದರು.

**<><*<><>*><>**

ನವದೆಹಲಿಯಲ್ಲಿಂದು ಭಾರತ ಅಂತಾರಾಷ್ಟ್ರೀಯ ಮಧ್ಯಸ್ಥಿಕಾ ಕೇಂದ್ರ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಧ್ಯಸ್ಥಿಕೆ - ಭಾರತೀಯ ದೃಷ್ಟಿಕೋನ ಕುರಿತಾದ ಸಮ್ಮೇಳನದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನಕರ್ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ಕಳೆದ ದಶಕದಲ್ಲಿ ದೇಶ ಕಂಡ ಪ್ರಗತಿ, ಭಾರತವನ್ನು ವಿಶ್ವದ ಅತ್ಯಂತ ಮಹತ್ವಾಕಾಂಕ್ಷೆಯ ರಾಷ್ಟ್ರವನ್ನಾಗಿ ಪರಿವರ್ತಿಸಿದೆ. ಜನ ಕೇಂದ್ರಿತ ನೀತಿಗಳಿಂದ ಪ್ರಯೋಜನ ಪಡೆದಿರುವ ಹಾಗೂ ಅಭಿವೃದ್ಧಿಯನ್ನು ಅನುಭವಿಸಿರುವ ಸಾರ್ವಜನಿಕರು ಇನ್ನೂ ಹೆಚ್ಚಿನ ಬೆಳವಣಿಗೆಯನ್ನು ನಿರೀಕ್ಷಿಸುತ್ತಿದ್ದಾರೆ ಎಂದರು.

**<><*<><>*><>**

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ಪ್ರೀಮಿಯಲ್ ಲೀಗ್ - ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<><>*><>**

ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿಂದು ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಇಬ್ಬರು ಮಾವೋವಾದಿಗಳು ಹತರಾಗಿದ್ದಾರೆ. ಕಿಸ್ತಾರಾಮ್ ಪ್ರದೇಶದಲ್ಲಿ ಮಾವೋವಾದಿಗಳು ಅಡಗಿರುವ ಕುರಿತು ಗುಪ್ತಚರ ಮಾಹಿತಿ ಮೇರೆಗೆ ಸಿಆರ್‌ಪಿಎಫ್ ಮತ್ತು ಜಿಲ್ಲಾ ಮೀಸಲು ಪಡೆ ಜಂಟಿ ಕಾರ್ಯಾಚರಣೆ ನಡೆಸಿದವು. ಈ ವೇಳೆ ಭದ್ರತಾಪಡೆಗಳ ಮೇಲೆ ಮಾವೋವಾದಿಗಳು ಗುಂಡಿನ ದಾಳಿ ಆರಂಭಿಸಿದರು. ಇದಕ್ಕೆ ಪ್ರತಿಯಾಗಿ ಭದ್ರತಾಪಡೆಗಳು ನಡೆಸಿದ ಗುಂಡಿನ ದಾಳಿಯಲ್ಲಿ ಇಬ್ಬರು ಮಾವೋವಾದಿಗಳು ಸಾವನಪ್ಪಿದರು. ಮೃತ ಮಾವೋವಾದಿಗಳ ಶವಗಳನ್ನು ಭದ್ರತಾ ಪಡೆಗಳು ವಶಕ್ಕೆ ಪಡೆದಿವೆ. ಈ ಪ್ರದೇಶದಲ್ಲಿ ಉಳಿದ ಮಾವೋವಾದಿಗಳಿಗಾಗಿ ಶೋಧ ಕಾರ್ಯ ಮುಂದುವರೆಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**